೯೪

## ಕರ್ನಾಟಕ ವಿಧಾನ ಪರಿಷತ್ತು

### ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಹೇಮಲತ ನಾಯಕ ರವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

ವಿಷಯ:

ಕರ್ನಾಟಕ ರಾಜ್ಯದಲ್ಲಿ ಅನೇಕ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಕಾಲೇಜುಗಳವೆ ಅಲ್ಲಿ ಅಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ ಯೂನಿಫಾರ್ಂ, ಸ್ಟೇಷನರಿ ಮತ್ತು ಶೂಗಳನ್ನು ವಿತರಿಸಿರುವುದಿಲ್ಲ ಎಂಬ ವಿಷಯದ ಕುರಿತು ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವರ ಗಮನ ಸೆಳೆಯ ಬಯಸುತ್ತೇನೆ.

ಉತ್ತರ:

2023-24ನೇ ಶೈಕ್ಷಣಿಕ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ 80-ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, 13-ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜುಗಳು, 29-ಡಾ||ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆಗಳು ಹಾಗೂ 04-ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ಶಾಲೆಗಳಲ್ಲಿ 2023-24ನೇ ಶೈಕ್ಷಣಿಕ ಸಾಲಿನಲ್ಲಿ ಒಟ್ಟು 35169 ವಿದ್ಯಾರ್ಥಿಗಳು ದಾಖಲಾತಿಯನ್ನು ಹೊಂದಿ ವ್ಯಾಸಂಗ ಮಾಡುತ್ತಿರುತ್ತಾರೆ.

ಸದರಿ ವಿದ್ಯಾರ್ಥಿಗಳಿಗೆ 2023-24ನೇ ಶೈಕ್ಷಣಿಕ ಸಾಲಿನಲ್ಲಿ 2 ಜೊತೆ ಸಿದ್ಧಪಡಿಸಿದ ಸಮವಸ್ತ್ರವನ್ನು ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಮೂಲಕ ಸರಬರಾಜು ಪಡೆಯಲು ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದ್ದು ಆರ್ಥಿಕ ಇಲಾಖೆಯ ಸಹಮತಿಗಾಗಿ ಸಲ್ಲಿಸಲಾಗಿದೆ. ನೋಟ್ ಪುಸ್ತಕ ಮತ್ತು ಲೇಖನ ಸಾಮಗ್ರಿಗಳನ್ನು ಸರಬರಾಜು ಮಾಡಲು ಮೆ|| ಮೈಸೂರು ಸೇಲ್ಸ್ ಇಂಟರ್‌ನ್ಯಾಶನಲ್ ಲಿ. ಬೆಂಗಳೂರು ರವರಿಗೆ ದಿನಾಂಕ:29-05-2023 ರಂದು ಕಾರ್ಯಾದೇಶ ನೀಡಲಾಗಿದೆ ಹಾಗೂ ಶೂ, ಸಾಕ್ಸ್, ಟೈ, ಬೆಲ್ಟ್, ಪಾಲೀಷ್ ಹಾಗೂ ಬ್ರಷ್‌ಗಳನ್ನು ವಸತಿ ಶಾಲೆಗಳಿಗೆ ಸರಬರಾಜು ಮಾಡಲು ಡಾ||ಬಾಬು ಜಗಜೀವನ್ ರಾಮ್, ಚರ್ಮ ಕೈಗಾರಿಕೆ ಅಭಿವೃದ್ಧಿ ನಿಗಮ, ಬೆಂಗಳೂರು ರವರಿಗೆ ದಿನಾಂಕ:28-06-2023 ರಂದು ಕಾರ್ಯಾದೇಶ ನೀಡಲಾಗಿದ್ದು, ಸರಬರಾಜು ಪ್ರಕ್ರಿಯೆ ಜಾರಿಯಲ್ಲಿದ್ದು, ತ್ವರಿತವಾಗಿ ಪೂರ್ಣಗೊಳಿಸಲು ಎಲ್ಲಾ ಅಗತ್ಯಕ್ರಮ ಕೈಗೊಳ್ಳಲಾಗುತ್ತಿದೆ.

**ಸಂಖ್ಯೆ: MWD 76 LMQ 2023**

(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು